**All India Radio: Bangalore**
**National Bulletin In Kannada**
**08.05.2026  19.35 hrs**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

**೧. ತಮಿಳುನಾಡಿನಲ್ಲಿ ವಿಜಯ್ ನೇತೃತ್ವದ ಟಿವಿಕೆಗೆ ಸಿಪಿಐ, ಸಿಪಿಎಂ ಬೆಂಬಲ**

**೨. ಪಶ್ಚಿಮ ಬಂಗಾಳದಲ್ಲಿ, ಬಿಜೆಪಿ ಶಾಸಕಾಂಗ ಪಕ್ಷದ ನಾಯಕರಾಗಿ ಹಿರಿಯ ನಾಯಕ ಸುವೇಂದು ಅಧಿಕಾರಿ ಆಯ್ಕೆ**

**೩. ಪರಮಾಣು ಶಸ್ತ್ರಾಸ್ತ್ರ ಹೊಂದಲು ಇರಾನ್‌ಗೆ ಬಿಡುವುದಿಲ್ಲ - ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್**

**೪. ಐಪಿಎಲ್ ಟಿ-೨೦ ಕ್ರಿಕೆಟ್; ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ ಟಾಸ್ ಗೆದ್ದ ಕೋಲ್ಕತ್ತಾ ನೈಟ್ ರೈಡರ್ಸ್ ಫೀಲ್ಡಿಂಗ್ ಆಯ್ಕೆ**

**<>><><*><><<>**

ತಮಿಳುನಾಡಿನಲ್ಲಿ ನೂತನ ಸರ್ಕಾರ ರಚನೆಗೆ ಏಕೈಕ ಅತಿದೊಡ್ಡ ಪಕ್ಷವಾದ ನಟ ಜೋಸೆಫ್ ವಿಜಯ್ ನೇತೃತ್ವದ ಟಿವಿಕೆ, ಸಿಪಿಐ, ಸಿಪಿಎಂ ಮತ್ತು ವಿಸಿಕೆ ಪಕ್ಷಗಳಿಂದ ಬೆಂಬಲ ಕೋರಿದೆ. ಈಗಾಗಲೇ ಐದು ಶಾಸಕರನ್ನು ಹೊಂದಿರುವ ಕಾಂಗ್ರೆಸ್, ಟಿವಿಕೆಗೆ ಬೆಂಬಲ ನೀಡಿದೆ. ಇಂದು ಸಾಕಷ್ಟು ಚರ್ಚೆಗಳ ನಂತರ ತಲಾ ಇಬ್ಬರು ಶಾಸಕರನ್ನು ಹೊಂದಿರುವ ಸಿಪಿಐ ಮತ್ತು ಸಿಪಿಎಂ, ಸರ್ಕಾರ ರಚಿಸಲು ಟಿವಿಕೆಗೆ ಬೇಷರತ್ ಬೆಂಬಲ ಘೋಷಿಸಿವೆ. ಇಂದು ರಾತ್ರಿ ಅಥವಾ ನಾಳೆಯ ಸಭೆಯ ನಂತರ ವಿಸಿಕೆ ತನ್ನ ನಿರ್ಧಾರವನ್ನು ಪ್ರಕಟಿಸುವ ಸಾಧ್ಯತೆಯಿದೆ ಎಂದು ಮೂಲಗಳು ತಿಳಿಸಿವೆ. ಇನ್ನೊಂದೆಡೆ, ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ತಮಿಳುನಾಡು ಬಿಜೆಪಿ ರಾಜ್ಯಾಧ್ಯಕ್ಷ ನೈನಾರ್ ನಾಗೇಂದ್ರನ್, ಚುನಾವಣಾ ಫಲಿತಾಂಶಗಳನ್ನು ಬಿಜೆಪಿ ಸೌಜನ್ಯದಿಂದ ಸ್ವೀಕರಿಸಿದೆ. ಯಾವುದೇ ರೀತಿಯಲ್ಲೂ ಟಿವಿಕೆ ಜೊತೆ ಹೊಂದಾಣಿಕೆ ಮಾಡಿಕೊಳ್ಳಲು ಬಿಜೆಪಿ ಬಯಸುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

**<>><><*><><<>**

ಪಶ್ಚಿಮ ಬಂಗಾಳದಲ್ಲಿ, ಬಿಜೆಪಿ ಹಿರಿಯ ನಾಯಕ ಸುವೇಂದು ಅಧಿಕಾರಿ ಅವರನ್ನು ಇಂದು ಬಿಜೆಪಿ ಶಾಸಕಾಂಗ ಪಕ್ಷದ ನಾಯಕರನ್ನಾಗಿ ಆಯ್ಕೆ ಮಾಡಲಾಗಿದೆ. ಇದರಿಂದಾಗಿ ಅವರು ಪಶ್ಚಿಮ ಬಂಗಾಳದ ಮೊದಲ ಬಿಜೆಪಿ ಮುಖ್ಯಮಂತ್ರಿಯಾಗಲು ದಾರಿ ಸುಗಮವಾಗಿದೆ. ಶಾಸಕಾಂಗ ಪಕ್ಷದ ಸಭೆಯಲ್ಲಿ ಸುವೇಂದು ಅಧಿಕಾರಿ ಅವರ ಹೆಸರನ್ನು ಪ್ರಸ್ತಾಪಿಸಲಾಯಿತು. ನೂತನವಾಗಿ ಆಯ್ಕೆಯಾದ ಬಿಜೆಪಿ ಶಾಸಕರು ಮತ್ತು ಪಕ್ಷದ ಹಿರಿಯ ನಾಯಕರ ಸಮ್ಮುಖದಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಅಧಿಕೃತವಾಗಿ ಅವರ ಹೆಸರನ್ನು ಘೋಷಿಸಿದರು. ಕೋಲ್ಕತಾದ ಬ್ರಿಗೇಡ್ ಪೆರೇಡ್ ಮೈದಾನದಲ್ಲಿ ನಾಳೆ ಪ್ರಮಾಣವಚನ ಸ್ವೀಕಾರ ಸಮಾರಂಭ ನಡೆಯಲಿದೆ.

**<>><><*><><<>**

ಇರಾನ್, ಪರಮಾಣು ಶಸ್ತ್ರಾಸ್ತ್ರ ಹೊಂದದಂತೆ ನೋಡಿಕೊಳ್ಳಲು ಅಮೆರಿಕ ಮತ್ತು ಐರೋಪ್ಯ ಒಕ್ಕೂಟ ಒಗ್ಗೂಡಿವೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಡೊನಾಲ್ಡ್ ಟ್ರಂಪ್, ಯೂರೋಪ್ ಆಯೋಗದ ಅಧ್ಯಕ್ಷೆ ಉಸ್ರುಲಾ ವನ್ ಡೆರ್ ಲೆಯೆನ್ ಅವರೊಂದಿಗೆ ದೂರವಾಣಿಯ ಮೂಲಕ ತಾವು ಮಾತನಾಡಿದ್ದು, ಪಶ್ಚಿಮ ಏಷ್ಯಾದಲ್ಲಿನ ಪರಿಸ್ಥಿತಿ ಕುರಿತು ಚರ್ಚಿಸಲಾಗಿದೆ. ಲಕ್ಷಾಂತರ ಜನರ ಮರಣಕ್ಕೆ ಕಾರಣವಾಗುವ ಶಸ್ತ್ರಾಸ್ತ್ರಗಳನ್ನು ಹೊಂದುವುದಕ್ಕೆ ಯಾವುದೇ ಕಾರಣಕ್ಕೂ ಅವಕಾಶ ನೀಡುವುದಿಲ್ಲ ಎಂದು ತಿಳಿಸಿದ್ದಾರೆ. ಇದೇ ವೇಳೆ, ಅಮೆರಿಕ ಮತ್ತು ಐರೋಪ್ಯ ಒಕ್ಕೂಟ ನಡುವಿನ ವಾಣಿಜ್ಯ ಬಾಂಧವ್ಯಗಳ ಕುರಿತು ಚರ್ಚಿಸಲಾಯಿತು. ಈ ಸಂದರ್ಭದಲ್ಲಿ ಸುಂಕ ಕಡಿತಗಳ ಕುರಿತ ಬದ್ಧತೆಗಳನ್ನು ಈಡೇರಿಸುವಂತೆ ಐರೋಪ್ಯ ಒಕ್ಕೂಟಕ್ಕೆ ಒತ್ತಾಯಿಸಲಾಯಿತು ಎಂದು ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ.

**<>><><*><><<>**

ಜಾಗತಿಕ ಆರ್ಥಿಕ ಸ್ಥಿರತೆಯ ಆಧಾರಸ್ತಂಭವಾಗಿ ಬೆಳೆಯುತ್ತಿರುವ ಭಾರತದ ಪಾತ್ರವನ್ನು ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಒತ್ತಿ ಹೇಳಿದ್ದಾರೆ. ಸುರಿನಾಮ್‌ನಲ್ಲಿರುವ ಸುರಿನಾಮಿಸ್ ಸಮಾಜದ ವಿವಿಧ ವರ್ಗಗಳ ಪ್ರತಿನಿಧಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು, ಈ ವರ್ಷ ಜಾಗತಿಕ ಬೆಳವಣಿಗೆಯ ಐಎಂಎಫ್ ಅಂದಾಜಿನ ಪ್ರಕಾರ, ಭಾರತ ಒಟ್ಟು ಜಾಗತಿಕ ಬೆಳವಣಿಗೆಯ ಶೇಕಡಾ ೧೭ ರಷ್ಟು ಕೊಡುಗೆ ನೀಡುತ್ತದೆ ಎಂದು ತಿಳಿಸಿದ್ದಾರೆ. ಇದರ ಪ್ರಕಾರ, ಭಾರತ ೨೦೨೭ ರಲ್ಲಿ ಜಾಗತಿಕ ನೈಜ ಜಿಡಿಪಿ ಬೆಳವಣಿಗೆಯ ಗಣನೀಯ ಶೇಕಡಾ ೧೭ ರಷ್ಟು ಪಾಲನ್ನು ಹೊಂದಲಿದೆ. ವಿಶ್ವದಲ್ಲಿ ವೇಗವಾಗಿ ವಿಸ್ತರಿಸುತ್ತಿರುವ ಪ್ರಮುಖ ಆರ್ಥಿಕತೆಯಾಗಿ ತನ್ನ ಸ್ಥಾನಮಾನವನ್ನು ಭಾರತ ಕಾಯ್ದುಕೊಳ್ಳುತ್ತದೆ ಎಂದು ಡಾ.ಎಸ್.ಜೈಶಂಕರ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

**<>><><*><><<>**

ಭಾರತ ವಿಶ್ವದ ವೇಗವಾಗಿ ಬೆಳೆಯುತ್ತಿರುವ ವಿಮಾನಯಾನ ಮಾರುಕಟ್ಟೆಯಾಗಿ ಮಾತ್ರವಲ್ಲದೆ, ವಿಮಾನ ಗುತ್ತಿಗೆ ಮತ್ತು ಹಣಕಾಸು ಹೂಡಿಕೆಯ ಪ್ರಮುಖ ಜಾಗತಿಕ ತಾಣವಾಗಿಯೂ ವೇಗವಾಗಿ ರೂಪಾಂತರಗೊಳ್ಳುತ್ತಿದೆ ಎಂದು ಕೇಂದ್ರ ವಿಮಾನಯಾನ ಸಚಿವ ಕೆ.ರಾಮ್ ಮೋಹನ್ ನಾಯ್ಡು ತಿಳಿಸಿದ್ದಾರೆ. ಗುಜರಾತ್‌ನ ಗಾಂಧಿನಗರದ ಗಿಫ್ಟ್ ಸಿಟಿಯಲ್ಲಿ ನಡೆದ ಭಾರತ ವಿಮಾನ ಗುತ್ತಿಗೆ ಮತ್ತು ಹೂಡಿಕೆ ಶೃಂಗಸಭೆ ೨.೦ ಉದ್ದೇಶಿಸಿ ಮಾತನಡಿದ ಅವರು, ದೇಶದ ವಿಮಾನಯಾನ ಕ್ಷೇತ್ರದಲ್ಲಿನ ಸುಧಾರಣೆಗಳು ಮತ್ತು ಮೂಲಸೌಕರ್ಯ ಅಭಿವೃದ್ಧಿಯು ಅಂತಾರಾಷ್ಟ್ರೀಯ ಹೂಡಿಕೆದಾರರನ್ನು ಆಕರ್ಷಿಸುತ್ತಿದೆ. ಇದು ಭಾರತವನ್ನು ವಿಮಾನಯಾನದ ಹಣಕಾಸು ವ್ಯವಹಾರಗಳ ಪ್ರಮುಖ ಕೇಂದ್ರವನ್ನಾಗಿ ಮಾಡಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

**<>><><*><><<>**

ವಲಸೆ ಕುರಿತಂತೆ ಭಾರತದ ಕ್ರಮವು ವಲಸಿಗರ ರಕ್ಷಣೆ, ಸಮಗ್ರ ಆಡಳಿತ ಮತ್ತು ಅಂತಾರಾಷ್ಟ್ರೀಯ ಸಹಕಾರದ ವಿಧಾನಗಳಿಂದ ನಿರ್ದೇಶಿಸಲ್ಪಟ್ಟಿದೆ ಎಂದು ವಿದೇಶಾಂಗ ವ್ಯವಹಾರಗಳ ಖಾತೆ ರಾಜ್ಯ ಸಚಿವ ಕೀರ್ತಿವರ್ಧನ್ ಸಿಂಗ್ ಹೇಳಿದ್ದಾರೆ. ನ್ಯೂಯಾರ್ಕ್‌ನಲ್ಲಿ ನಡೆದ ಅಂತಾರಾಷ್ಟ್ರೀಯ ವಲಸೆ ಪರಿಶೀಲನಾ ವೇದಿಕೆಯ ನಿಯೋಗಗಳನ್ನು ಉದ್ದೇಶಿಸಿ ಮಾತನಾಡಿದ ಅವರು, ಭಾರತ, ೨೩ ದೇಶಗಳೊಂದಿಗೆ ಸಮಗ್ರ ದ್ವಿಪಕ್ಷೀಯ ವಲಸೆ ಕುರಿತ ಒಪ್ಪಂದಗಳು ಮತ್ತು ಒಡಂಬಡಿಕೆಗಳನ್ನು ಅಖೈರುಗೊಳಿಸಿವೆ. ವಲಸೆಯು ಮುಖ್ಯವಾಗಿ ಜನರು ಮತ್ತು ಅವರ ಅಶೋತ್ತರ ಸ್ಥಿತಿಸ್ಥಾಪಕತ್ವ ಹಾಗೂ ಕೊಡುಗೆಗಳಿಗೆ ಸಂಬಂಧಿಸಿದ್ದಾಗಿದೆ. ಒಳಗೊಳ್ಳುವಿಕೆ ಮತ್ತು ಮಾನವೀಯತೆ ಕಾರ್ಯಚೌಕಟ್ಟು ರೂಪಿಸುವುದು ಭಾರತದ ಪ್ರಯತ್ನವಾಗಿದೆ ಎಂದು ಅವರು ತಿಳಿಸಿದ್ದಾರೆ ಇದಕ್ಕೂ ಮುನ್ನ ಸಚಿವ ಕೀರ್ತಿವರ್ಧನ್ ಸಿಂಗ್, ವಿಶ್ವಸಂಸ್ಥೆ ಪ್ರಧಾನ ಕಾರ್ಯದರ್ಶಿ ಅಂಟೋನಿಯೋ ಗುಟೆರೆಸ್ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು.

**<>><><*><><<>**

ಭಯೋತ್ಪಾದನೆಯನ್ನು ಕಾರ್ಯತಂತ್ರದ ಪಾಲುದಾರರಾಗಿ ಎದುರಿಸುವಲ್ಲಿ ದ್ವಿಪಕ್ಷೀಯ ಸಹಕಾರದ ಮಹತ್ವವನ್ನು ಭಾರತ ಮತ್ತು ಸಿಂಗಾಪುರ ಒತ್ತಿ ಹೇಳಿವೆ. ಭಾರತ ಮತ್ತು ಸಿಂಗಾಪುರ ನಡುವಿನ ಭಯೋತ್ಪಾದನೆ ಮತ್ತು ಅಂತಾರಾಷ್ಟ್ರೀಯ ಅಪರಾಧಗಳನ್ನು ಎದುರಿಸುವ ಜಂಟಿ ಕಾರ್ಯಕಾರಿ ಗುಂಪಿನ ಐದನೇ ಸಭೆ ನವದೆಹಲಿಯಲ್ಲಿ ನಡೆಯಿತು. ಗಡಿಯಾಚೆಗಿನ ಭಯೋತ್ಪಾದನೆ ಸೇರಿದಂತೆ ಭಯೋತ್ಪಾದನೆಯ ಎಲ್ಲಾ ರೂಪಗಳು ಮತ್ತು ಅಭಿವ್ಯಕ್ತಿಗಳನ್ನು ಜಂಟಿ ಕಾರ್ಯಕಾರಿ ಗುಂಪು, ನಿಸ್ಸಂದಿಗ್ಧವಾಗಿ ಮತ್ತು ಬಲವಾಗಿ ಖಂಡಿಸಿತು ಹಾಗೂ ಭಯೋತ್ಪಾದನೆಯ ಬಗ್ಗೆ ಶೂನ್ಯ ಸಹಿಷ್ಣುತೆಯ ತತ್ವವನ್ನು ಪುನರುಚ್ಚರಿಸಿತು. ಕಳೆದ ವರ್ಷ ಏಪ್ರಿಲ್ ೨೨ ರಂದು ಪಹಲ್ಗಾಮ್ ಭಯೋತ್ಪಾದಕ ದಾಳಿ ಮತ್ತು ಕಳೆದ ವರ್ಷ ನವೆಂಬರ್ ೧೦ ರಂದು ನವದೆಹಲಿಯ ಕೆಂಪು ಕೋಟೆ ಬಳಿ ನಡೆದ ಭಯೋತ್ಪಾದಕ ಕೃತಕಗಳನ್ನು ಸಿಂಗಾಪುರ ಖಂಡಿಸಿತು ಮತ್ತು ಭಯೋತ್ಪಾದನೆಗೆ ಕಾರಣರಾದವರನ್ನು ಹೊಣೆಗಾರರನ್ನಾಗಿ ಮಾಡಬೇಕು ಎಂದು ಸಿಂಗಾಪುರ ಒತ್ತಿ ಹೇಳಿದೆ. ಸಭೆಯ ಅಧ್ಯಕ್ಷತೆಯನ್ನು ವಿದೇಶಾಂಗ ಸಚಿವಾಲಯದ ಜಂಟಿ ಕಾರ್ಯದರ್ಶಿ ಡಾ. ವಿನೋದ್ ಬಹಾಡೆ ಮತ್ತು ಸಿಂಗಾಪುರದ ಗೃಹ ಸಚಿವಾಲಯದ ಉಪ ಕಾರ್ಯದರ್ಶಿ ನ್ಗಿಯಾಮ್ ಶಿಹ್ ಚುನ್ ವಹಿಸಿದ್ದರು.

**<>><><*><><<>**

ದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿಂದು ನಡೆಯುತ್ತಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ಹಾಗೂ ಕೋಲ್ಕತ್ತಾ ನೈಟ್ ರೈಡರ್ಸ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ಕೋಲ್ಕತ್ತಾ ನೈಟ್ ರೈಡರ್ಸ್ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

**<>><><*><><<>**

ಶಾಂಘೈನಲ್ಲಿ ಇಂದು ನಡೆದ ಆರ್ಚರಿ ವಿಶ್ವಕಪ್ ಹಂತ ೨ ರ ಮಹಿಳೆಯರ ರಿಕರ್ವ್ ವೈಯಕ್ತಿಕ ಸ್ಪರ್ಧೆಯಲ್ಲಿ ಭಾರತದ ಸಿಮ್ರನ್‌ಜೀತ್ ಕೌರ್ ಸೆಮಿಫೈನಲ್ ಪ್ರವೇಶಿಸಿದ್ದಾರೆ.  ವಿಶ್ವಕಪ್ ಫೈನಲ್ ಹಂತಕ್ಕೆ ಮೊದಲ ಬಾರಿಗೆ ಪ್ರವೇಶಿಸಿರುವ ಸಿಮ್ರನ್‌ಜೀತ್, ಕ್ವಾರ್ಟರ್ ಫೈನಲ್‌ನಲ್ಲಿ ಚೈನೀಸ್ ತೈಪೆಯ ಎದುರಾಳಿಯನ್ನು ೬-೦ ಅಂತರದಿಂದ ಸೋಲಿಸಿದರು. ಇದಕ್ಕೂ ಮೊದಲು, ನಿನ್ನೆ ನಡೆದ ಸೆಮಿಫೈನಲ್‌ನಲ್ಲಿ ಭಾರತೀಯ ಮಹಿಳಾ ರಿಕರ್ವ್ ತಂಡ, ದಾಖಲೆಯ ೧೦ ಬಾರಿಯ ಒಲಿಂಪಿಕ್ ಚಾಂಪಿಯನ್ ದಕ್ಷಿಣ ಕೊರಿಯಾ ವಿರುದ್ಧ ಅದ್ಭುತ ಜಯ ಸಾಧಿಸುವ ಮೂಲಕ ಪಂದ್ಯಾವಳಿಯಲ್ಲಿ ದೇಶದ ಮೊದಲ ಪದಕವನ್ನು ಖಚಿತಪಡಿಸಿತು.

**<>><><*><><<>**

ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ಅವರು ಅಬುಧಾಬಿಯಲ್ಲಿ ಯುಎಇಯ ಅಂತಾರಾಷ್ಟ್ರೀಯ ಸಹಕಾರ ಖಾತೆ ರಾಜ್ಯ ಸಚಿವ ಮತ್ತು ಭಾರತದ ವಿಶೇಷ ರಾಯಭಾರಿ ರೀಮ್ ಅಲ್ ಹಶಿಮಿ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು. ಭಾರತ-ಯುಎಇ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆ ಮತ್ತು ಪರಸ್ಪರ ಆಸಕ್ತಿಯ ಜಾಗತಿಕ ವಿಷಯಗಳ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.  ಉಭಯ ನಾಯಕರು ವ್ಯಾಪಾರ, ಹೂಡಿಕೆ, ಇಂಧನ, ರಕ್ಷಣೆ, ಫಿನ್‌ಟೆಕ್, ಆರೋಗ್ಯ, ಶಿಕ್ಷಣ, ಪ್ರಾದೇಶಿಕ ಪರಿಸ್ಥಿತಿ ಮತ್ತು ಪರಸ್ಪರ ಆಸಕ್ತಿಯ ಜಾಗತಿಕ ವಿಷಯಗಳ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೬.೦೫ ಕ್ಕೆ  ><><<>**